ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 684/2025

ಸಿ.ಡಬ್ಲ್ಯೂ -01
ಪಿ.ಡಬ್ಲ್ಯೂ-01

ಸಾಕ್ಷಿದಾರನ ಹೆಸರು :- ದೇವಮ್ಮಾ
ಗಂಡನ ಹೆಸರು :- ಗಂಗಯ್ಯ
ವಯಸ್ಸು :- 65 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ನಿಂಗಿಕೊಪ್ಪಲು

**ಸಾಕ್ಷಿಗೆ ದಿಃ 01.06.2026 ರಂದು ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಆರೋಪಿತರು ನನಗೆ ಗೊತ್ತು. ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ. ದೂರಿಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ 1 ಸಹಿ ಎಂದು ಗುರುತಿಸಲಾಯಿತು. ಸ್ಥಳ ಪಂಚನಾಮೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ 2 ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಗೆ ಸಹಿಯನ್ನು 2-3 ವರ್ಷಗಳ ಹಿಂದೆ ಪೊ. ಠಾಣೆಗೆ ಹೋದಾಗ ಪಡೆದಿರುತ್ತಾರೆ. ಅದರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಏನನ್ನು ಜಪ್ತು ಮಾಡಿರುವುದಿಲ್ಲ. ನಕ್ಷೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ 3 ಎಂದು ಗುರುತಿಸಲಾಯಿತು. ನಾನು ಮರು ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 04.02.2025 ರಂದು ರಾತ್ರಿ 8 ಗಂಟೆಯ ಸಮಯದಲ್ಲಿ ನಮ್ಮ ಮನೆಯ ಮುಂಬಾಗದಲ್ಲಿ ನಾನು ನಿಂತಿರುವಾಗ ಆರೋಪಿ ಅಲ್ಲಿಗೆ ಬಂದು ಖಾಲಿ ನಿವೇಶನವನ್ನು ಬರೆದುಕೊಂಡುವಂತೆ ನನಗೆ ಅವಾಚ್ಯ ಶಬ್ದಗಳಿಂದ ಬೈದು ಅಲ್ಲಿ ಬಿದ್ದಿದ್ದ ದೊಣ್ಣೆಯಿಂದ

ಹೊಡೆದು ಗಾಯ ಮಾಡಿರುತ್ತಾನೆ ಎಂದರೆ ಸರಿಯಲ್ಲ.

ದಿಃ 08.02.2025 ರಂದು ಸಂಜೆ 4 ರಿಂದ 5 ಗಂಟೆಯವರೆಗೆ ಚಾಸಾ 2 ಮತ್ತು 3 ಅವರ ಸಮಕ್ಷಮ ಪೋಲಿಸರು ಸ್ಥಳ ಪಂಚನಾಮೆ ಮಾಡಿ ಒಂದು ದೊಣ್ಣೆಯನ್ನು ಜಪ್ತು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ನಕ್ಷೆಯನ್ನು ಸಹ ತಯಾರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ನಾನು ನನ್ನ ಮರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 4 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಉದ್ದೇಶದಿಂದ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.